# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1261
ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.
ಉತ್ತರಿಸಬೇಕಾಗಿದ್ದ ದಿನಾಂಕ : 26.02.2018

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣವು ದಿನೇ ದಿನೇ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದಕ್ಕೆ ಕಾರಣವೇನು; (ವಿವರ ನೀಡುವುದು) | ಹೌದು<br>3 ರಿಂದ 6 ವರ್ಷದ ಮಕ್ಕಳು ಖಾಸಗಿ ಶಾಲೆಗಳಿಗೆ ಹೋಗುತ್ತಿರುವುದರಿಂದ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣವು ಕಡಿಮೆಯಾಗುತ್ತಿದೆ. |
| ಆ) | ಅಂಗನವಾಡಿ ಕೇಂದ್ರದ ಗುಣಮಟ್ಟವನ್ನು ಹೆಚ್ಚಿಸಿ ಸುತ್ತಮುತ್ತಲಿನ ಮಕ್ಕಳನ್ನು ಆಕರ್ಷಣೆಗೊಳಿಸಿ ದಾಖಲಾತಿ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಅಂಗನವಾಡಿ ಕೇಂದ್ರದ ಗುಣಮಟ್ಟವನ್ನು ಹೆಚ್ಚಿಸಿ ಸುತ್ತಮುತ್ತಲಿನ ಮಕ್ಕಳನ್ನು ಆಕರ್ಷಣೆಗೊಳಿಸಲು ಸರ್ಕಾರ ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ.<br>• ಅಂಗನವಾಡಿ ವ್ಯಾಪಿಗೆ ಬರುವ ಮಕ್ಕಳಿಗೆ ಪ್ರತಿ ದಿನ ರೂ. 8.00/- ಮತ್ತು ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ ರೂ.12.00/- ರ ಘಟಕ ವೆಚ್ಚದಡಿ ವರ್ಷಕ್ಕೆ 300 ದಿನಗಳಿಗೆ ಪೂರಕ ಪೌಷ್ಠಿಕ ಆಹಾರ ನೀಡಲಾಗುತ್ತಿದೆ.<br>• ಮಕ್ಕಳನ್ನು ಆಕರ್ಷಿಸಲು ಶಾಲಾ ಪೂರ್ವ ಶಿಕ್ಷಣಕ್ಕೆ ಪೂರಕವಾಗಿ ಅಂಗನವಾಡಿ ಕಟ್ಟಡಗಳ ಗೋಡೆಗಳ ಪೈಂಟಿಂಗ್‌ಗಳನ್ನು ಮಾಡಿಸುವುದರ ಮೂಲಕ "ಬಾಲ ಸ್ನೇಹಿ ಯೋಜನೆಯಡಿ ಪ್ರತಿ ಅಂಗನವಾಡಿಗೆ ರೂ10,000/- ನೀಡಲಾಗುತ್ತಿದೆ.<br>• ಪ್ರತಿ ವರ್ಷ 2ನೇ ಅಕ್ಟೋಬರ್ ರಂದು ಅಂಗನವಾಡಿ ದಿನ ಎಂದು ಆಚರಿಸಲಾಗುತ್ತಿದೆ. ವೇಷಭೂಷಣ, ಬಾಲಮೇಳ, ಆಟೋಟಗಳ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.<br>• ಇಲಾಖೆಯ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಅಂಗನವಾಡಿ/ತಾಲ್ಲೂಕು ಮಟ್ಟದಲ್ಲಿ ಆಂದೋಲನ, ಜಾಥಾಗಳನ್ನು ಏರ್ಪಡಿಸಲಾಗುತ್ತಿದೆ.<br>• ಮಕ್ಕಳ ಬೆಳವಣಿಗೆಗೆ ಅನುವಾಗುವಂತೆ ಹಾಗೂ ಕ್ರಿಯಾಶೀಲತೆಯನ್ನು ಹೆಚ್ಚಿಸಲು ವಯಸ್ಸಿಗೆ ಅನುಗುಣವಾಗಿ ಪ್ರತಿ ವರ್ಷ ಪ್ರತಿ ಅಂಗನವಾಡಿ ಕೇಂದ್ರಕ್ಕೆ ರೂ.3000/- ಮೌಲ್ಯದ ಆಟಿಕೆಗಳನ್ನು ನೀಡಲಾಗುತ್ತಿದೆ.<br>• ಪ್ರತಿ ತಿಂಗಳು ಇಸಿಸಿಇ ದಿನ ಆಚರಿಸಲಾಗುತ್ತಿದ್ದು ಅವರ ಬೆಳವಣಿಗೆ ಬಗ್ಗೆ ಪೋಷಕರೊಂದಿಗೆ ಚರ್ಚಿಸಲಾಗುತ್ತಿದೆ.<br>• 6 ತಿಂಗಳಿಂದ – 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಕೆನೆಸಹಿತ ಹಾಲನ್ನು ನೀಡಲಾಗುತ್ತಿದೆ. |

| | | |
|---|---|---|
| | | • 3 ರಿಂದ 6 ವರ್ಷದ ಸಾಮಾನ್ಯ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ. |
| ಇ) | ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ನೀಡಲಾಗುವ ಸೌಲಭ್ಯಗಳೇನು; (ಪೂರ್ಣ ವಿವರ ನೀಡುವುದು) | • ಕ್ಷೀರ ಭಾಗ್ಯ ಯೋಜನೆ: ಈ ಯೋಜನೆಯಡಿ 6 ತಿಂಗಳಿಂದ – 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಕೆನೆಸಹಿತ ಹಾಲನ್ನು ನೀಡಲಾಗುತ್ತಿದೆ.<br>• 06 ತಿಂಗಳಿಂದ 3 ವರ್ಷದ ತೀವ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ, 3–6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ.<br>• 5 ಹಿಂದುಳಿದ ಜಿಲ್ಲೆಗಳಾದ ಬೀದರ, ಕಲಬುರ್ಗಿ, ರಾಯಚೂರು, ಕೊಪ್ಪಳ ಹಾಗೂ ಯಾದಗಿರಿ ಜಿಲ್ಲೆಗಳ 6 ತಿಂಗಳಿಂದ – 3 ವರ್ಷದ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3–6 ವರ್ಷದ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ, ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ.<br>• 3 ರಿಂದ 6 ವರ್ಷದ ಸಾಮಾನ್ಯ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ. |
| ಈ) | ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಆರೋಗ್ಯದ ಬಗ್ಗೆ ಕೈಗೊಂಡ ಕ್ರಮಗಳಾವುವು; (ವಿವರ ನೀಡುವುದು) | • ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಯೋಜನೆಯಡಿ ಔಷಧಿ ಹಾಗೂ ಚಿಕಿತ್ಸಾ ಆಹಾರಕ್ಕಾಗಿ (Therapeutic food) ವಾರ್ಷಿಕ ಪ್ರತಿ ಮಗುವಿಗೆ ರೂ.2000/-ಗಳಂತೆ ವೆಚ್ಚ ಭರಿಸಲಾಗುತ್ತಿದೆ.<br>• ಆರೋಗ್ಯ ಇಲಾಖೆಯ NRC ~~ಹಾಗೂ MNRC~~ ಗಳಲ್ಲಿ ಅಪೌಷ್ಠಿಕ ಮಕ್ಕಳಿಗೆ ಚಿಕಿತ್ಸೆಯನ್ನು ನೀಡಲಾಗುತ್ತಿದೆ.<br>• ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಫಲಾನುಭವಿಗಳ ಆರೋಗ್ಯ ತಪಾಸಣೆಯನ್ನು ಪ್ರತಿ 2 ತಿಂಗಳಿಗೊಮ್ಮೆ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ತಜ್ಞ ವೈದ್ಯರಿಂದ ಕೈಗೊಳ್ಳಲಾಗುತ್ತಿದೆ.<br>• ಅಪೌಷ್ಠಿಕ ಮಕ್ಕಳನ್ನು ಗುರುತಿಸಲು ಅನುವಾಗುವಂತೆ ಪ್ರಸ್ತುತ ವರ್ಷ ಮಕ್ಕಳ ತೂಕದ ಜೊತೆಗೆ ಉದ್ದ/ಎತ್ತರವನ್ನು ಸಹ ಅಳೆದು ದಾಖಲಿಸಲು ತಿಳಿಸಲಾಗಿರುತ್ತದೆ. |

ಸಂ:ಮಮಇ 108 ಐಸಿಡಿ 2018

(ಡಾ. ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು